ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ತೋಟಗಾರಿಕಾ ಬೆಳೆಗಳ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

143 (154) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತೋಟಗಾರಿಕಾ ಬೆಳೆ ಕೃಷಿಯಲ್ಲಿರುವ ಒಟ್ಟು ವಿಸ್ತೀರ್ಣ ಎಷ್ಟು; (ಜಿಲ್ಲಾವಾರು ಮತ್ತು ಬೆಳೆವಾರು ವಿವರಗಳನ್ನು ನೀಡುವುದು)

(ಆ) ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುವಿಕೆ ಸಮಯದಲ್ಲಿ ಕೊಯ್ಲು ಮೊದಲಿಗೆ ಮತ್ತು ಕೊಯ್ಲು ಸಂದರ್ಭದಲ್ಲಿ ನಾಶವಾದ ತೋಟಗಾರಿಕಾ ಬೆಳೆಯ ವಿಸ್ತೀರ್ಣವೆಷ್ಟು;

(ಇ) ಕೋವಿಡ್-19 ಪರಿಹಾರ ಪ್ಯಾಕೇಜ್ ಅಡಿಯಲ್ಲಿ ತೋಟಗಾರಿಕಾ ಬೆಳೆಗಾರರಿಗೆ ವಿವಿಧ ಬೆಳೆಗಳ ಬಾಬ್ತು ಒದಗಿಸಲಾದ ಪರಿಹಾರದ ಮೊತ್ತ ಎಷ್ಟು; (ಮಾಹಿತಿ ನೀಡುವುದು)

(ಈ) ಟೊಮ್ಯಾಟೊ, ಈರುಳ್ಳಿ ಮತ್ತು ಆಲೂಗೆಡ್ಡೆ ಈ ಮೂರು ಮೂಲ ತರಕಾರಿಗಳು ಪದೇ ಪದೇ ಬೆಲೆಯ ಏರುಪೇರಿಗೆ ತುತ್ತಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದಕ್ಕೆ ಕಾರಣಗಳೇನು ಹಾಗೂ ಇದನ್ನು ತಡೆಗಟ್ಟಲು ಸರ್ಕಾರದ ಕ್ರಮವೇನು ;

(ಉ) ರೈತರಿಗೆ ಸಂಭಾವನೆ ಹಾಗೂ ಗ್ರಾಹಕರಿಗೆ ಕೈಗೆಟುಕುವ ಬೆಲೆಯನ್ನು ಖಾತರಿಪಡಿಸುವ ಉಭಯ ಉದ್ದೇಶಗಳನ್ನು ಈಡೇರಿಸುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ?